Akashvani : Bangalore
National Bulletin In Kannada
10.07.2024 / 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<><*<><>*><>

ಮುಖ್ಯಾಂಶಗಳು

೧. ಆಸ್ಟ್ರೀಯಾ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ; ಆಸ್ಟ್ರೀಯಾ ಅಧ್ಯಕ್ಷ ಅಲೆಕ್ಸಾಂಡರ್ ವ್ಯಾನ್ ಡೆರ್ ಬೆಲ್ಲೆನ್ ಜೊತೆ ಮಾತುಕತೆ

೨. ಏಳು ರಾಜ್ಯಗಳ ಹದಿಮೂರು ವಿಧಾನಸಭಾ ಕ್ಷೇತ್ರಗಳಿಗೆ ಇಂದು ಉಪಚುನಾವಣೆ

೩. ಉತ್ತರಪ್ರದೇಶದ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ವೈಮಾನಿಕ ಸಮೀಕ್ಷೆ ನಡೆಸಲಿರುವ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್

೪. ಮಹಿಳಾ ಟಿ-೨೦ ಕ್ರಿಕೆಟ್; ದಕ್ಷಿಣ ಆಫ್ರಿಕಾ ವಿರುದ್ಧ ಭಾರತಕ್ಕೆ ೧೦ ವಿಕೆಟ್‌ಗಳ ಭರ್ಜರಿ ಜಯ

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು, ಎರಡು ದಿನಗಳ ಆಸ್ಟ್ರಿಯಾ ಪ್ರವಾಸದಲ್ಲಿ ನಿನ್ನೆ ವಿಯೆನ್ನಾಗೆ ಭೇಟಿ ನೀಡಿದ್ದಾರೆ. ಪ್ರದಾನಿ ನರೇಂದ್ರ ಮೋದಿಯವರಿಗೆ ಭಾರತೀಯ ಸಮುದಾಯದ ಸದಸ್ಯರಿಂದ ಆತ್ಮೀಯ ಸ್ವಾಗತವನ್ನು ನೀಡಲಾಯಿತು. ರಷ್ಯಾಕ್ಕೆ ಎರಡು ದಿನಗಳ ಭೇಟಿಯ ನಂತರ ಮಾಸ್ಕೋದಿಂದ ಆಸ್ಟ್ರಿಯಾಕ್ಕೆ ಆಗಮಿಸಿದರು. ರಷ್ಯಾದಲ್ಲಿ ಅಧ್ಯಕ್ಷ ಪುಟಿನ್ ಅವರೊಂದಿಗೆ ೨೨ ನೇ ಭಾರತ-ರಷ್ಯಾ ವಾರ್ಷಿಕ ಶೃಂಗಸಭೆಯಲ್ಲಿ ಅವರು ಪಾಲ್ಗೊಂಡಿದ್ದರು. ೪೧ ವರ್ಷಗಳ ನಂತರ ಭಾರತದ ಪ್ರಧಾನಿಯೊಬ್ಬರು ಆಸ್ಟ್ರಿಯಾಕ್ಕೆ ನೀಡಿದ ಮೊದಲ ಭೇಟಿ ಇದಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು, ಆಸ್ಟ್ರಿಯಾದ ಅಧ್ಯಕ್ಷ ಅಲೆಕ್ಸಾಂಡರ್ ವ್ಯಾನ್ ಡೆರ್ ಬೆಲ್ಲೆನ್ ಅವರನ್ನು ಭೇಟಿ ಮಾಡಲಿದ್ದಾರೆ ಮತ್ತು ಇಂದು ಆಸ್ಟ್ರಿಯಾದ ಚಾನ್ಸೆಲರ್ ಕಾರ್ಲ್ ನೆಹಮ್ಮರ್ ಅವರೊಂದಿಗೆ ಸಹ ಮಾತುಕತೆ ನಡೆಸಲಿದ್ದಾರೆ. ಪ್ರಧಾನಿ ಹಾಗೂ ಆಸ್ಟ್ರಿಯಾದ ಚಾನ್ಸೆಲರ್ ಅವರು ಭಾರತ ಮತ್ತು ಆಸ್ಟ್ರಿಯಾದ ಉದ್ಯಮಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನರೇಂದ್ರ ಮೋದಿ ಅವರು ವಿಯೆನ್ನಾದಲ್ಲಿ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ. ಕಳೆದ ರಾತ್ರಿ, ಆಸ್ಟ್ರಿಯಾದ ಚಾನ್ಸೆಲರ್ ಆಯೋಜಿಸಿದ್ದ ಔತಣಕೂಟದಲ್ಲಿ ಅವರು ಭಾಗವಹಿಸಿದ್ದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ ಅವರು, ಆತ್ಮೀಯ ಸ್ವಾಗತಕ್ಕಾಗಿ ಚಾನ್ಸೆಲರ್ ನೆಹಮ್ಮರ್ ಅವರಿಗೆ ಧನ್ಯವಾದ ತಿಳಿಸಿದ್ದಾರೆ. ಜಾಗತಿಕ ಒಳಿತಿಗಾಗಿ ಎರಡು ರಾಷ್ಟ್ರಗಳು ಒಟ್ಟಾಗಿ ಕೆಲಸ ಮಾಡುವುದನ್ನು ಮುಂದುವರಿಸಲಿವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

<><*<><>*><>

ರಷ್ಯಾದ ಮಿಲಿಟರಿಯಲ್ಲಿ ಸಹಾಯಕ ಸಿಬ್ಬಂದಿಯಾಗಿ ಕೆಲಸ ಮಾಡುತ್ತಿರುವ ಭಾರತೀಯ ಪ್ರಜೆಗಳನ್ನು ಶೀಘ್ರ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಖಚಿತಪಡಿಸಿಕೊಳ್ಳಲು ಭಾರತದ ಬೇಡಿಕೆಗೆ ರಷ್ಯಾ ಒಪ್ಪಿಗೆ ನೀಡಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿನಯ್ ಕ್ವಾತ್ರಾ ತಿಳಿಸಿದ್ದಾರೆ.

ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಮಾತುಕತೆಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ, ಈ ವಿಷಯವನ್ನು ಪ್ರಸ್ತಾಪಿಸಿದ್ದಾರೆ ಎಂದು ತಿಳಿದುಬಂದಿದೆ.

<><*<><>*><>

ಏಳು ರಾಜ್ಯಗಳ ಹದಿಮೂರು ವಿಧಾನಸಭಾ ಕ್ಷೇತ್ರಗಳಿಗೆ ಇಂದು ಉಪಚುನಾವಣೆ ನಡೆಯಲಿದೆ. ಪಶ್ಚಿಮ ಬಂಗಾಳದ ರಾಯ್‌ಗಂಜ್, ರಣಘಾಟ್ ದಕ್ಷಿಣ್, ಬಗ್ದಾ ಮತ್ತು ಮಾಣಿಕ್ತಾಲಾ, ಹಿಮಾಚಲ ಪ್ರದೇಶದ ಡೆಹ್ರಾ, ಹಮೀರ್‌ಪುರ್ ಮತ್ತು ನಲಗಢ್ ಮತ್ತು ಉತ್ತರಾಖಂಡದ ಬದರಿನಾಥ್ ಮತ್ತು ಮಂಗಳೌರ್, ಬಿಹಾರದ ರುಪೌಲಿ, ಮಧ್ಯಪ್ರದೇಶದ ಅಮರವಾರ, ತಮಿಳುನಾಡಿನ ವಿಕ್ರವಾಂಡಿ ಮತ್ತು ಪಂಜಾಬ್‌ನ ಜಲಂಧರ್ ಪಶ್ಚಿಮದಲ್ಲಿ ಉಪಚುನಾವಣೆ ನಡೆಯಲಿದೆ. ಇದೇ ಶನಿವಾರ ಮತ ಎಣಿಕೆ ನಡೆಯಲಿದೆ.

<><*<><>*><>

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮಕ್ಕಾಗಿ ಡಾ.ಸೌಮ್ಯ ಸ್ವಾಮಿನಾಥನ್ ಅವರನ್ನು ಪ್ರಧಾನ ಸಲಹೆಗಾರರನ್ನಾಗಿ ನೇಮಿಸಲಾಗಿದೆ. ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದ ಪ್ರಧಾನ ಸಲಹೆಗಾರರಾಗಿ ಪ್ರೊಫೆಸರ್ ಸ್ವಾಮಿನಾಥನ್ ಅವರು ಕಾರ್ಯಕ್ರಮದ ಗುರಿಗಳನ್ನು ಸಾಧಿಸಲು ಹಾಗೂ ಕಾರ್ಯತಂತ್ರದ ಕುರಿತು ತಾಂತ್ರಿಕ ಸಲಹೆಗಳನ್ನು ನೀಡಲಿದ್ದಾರೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ತಿಳಿಸಿದೆ. ಪ್ರೊಫೆಸರ್ ಡಾ.ಸೌಮ್ಯ ಸ್ವಾಮಿನಾಥನ್ ಅವರು ವಿಶ್ವ ಆರೋಗ್ಯ ಸಂಸ್ಥೆಯ ಮಾಜಿ ಮುಖ್ಯ ವಿಜ್ಞಾನಿಯಾಗಿ ಮತ್ತು ಈ ಹಿಂದೆ ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿಯ (Iಅಒಖ) ಮಹಾನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದಾರೆ.

<><*<><>*><>

ಉತ್ತರ ಪ್ರದೇಶದ ತಾರೈ ಪ್ರದೇಶದಲ್ಲಿ ಪ್ರವಾಹ ಪರಿಸ್ಥಿತಿ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದೆ. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಕೇಂದ್ರ ಸಚಿವ ಜಿತೇನ್ ಪ್ರಸಾದ್ ಅವರೊಂದಿಗೆ ಪ್ರವಾಹದಿಂದ ಅತಿ ಹೆಚ್ಚು ಹಾನಿಗೊಳಗಾದ ಪ್ರದೇಶಗಳಾದ ಪಿಲಿಭಿತ್ ಮತ್ತು ಲಖಿಂಪುರ ಖಿರಿ ಜಿಲ್ಲೆಗಳಿಗೆ ಭೇಟಿ ನೀಡಲಿದ್ದಾರೆ.  ವೈಮಾನಿಕ ಸಮೀಕ್ಷೆ ನಡೆಸಿದ ನಂತರ ಅವರು ಪ್ರವಾಹ ಸಂತ್ರಸ್ತರನ್ನು ಭೇಟಿ ಮಾಡಲಿದ್ದು, ಈ ಪ್ರದೇಶಗಳಲ್ಲಿ ನಡೆಯುತ್ತಿರುವ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆ ಕುರಿತು ಪರಿಶೀಲಿಸಲಿದ್ದಾರೆ.  "ಪಿಲಿಭಿತ್-ತನಕ್ಪುರ್ ಮತ್ತು ಪಿಲಿಭಿತ್ ಮೈಲಾನಿ ಮಾರ್ಗದ ರೈಲುಗಳ ಸಂಚಾರವನ್ನು ಕಳೆದ ೨ ದಿನಗಳಿಂದ ರದ್ದುಗೊಳಿಸಲಾಗಿದೆ. ಜಿಲ್ಲೆಯಲ್ಲಿ ಐದು ಗ್ರಾಮಸ್ಥರನ್ನು ವಾಯುಸೇನೆ ರಕ್ಷಿಸಿದ್ದು, ಗಂಗಾ, ಕುವಾನೋ, ಘಾಘ್ರಾ, ರಾಪ್ತಿ ಮತ್ತು ಶಾರದಾ ನದಿಗಳ ಪ್ರವಾಹದಿಂದ ನೂರಾರು ಗ್ರಾಮಸ್ಥರಿಗೆ ಹಾನಿ ಉಂಟಾಗಿದೆ. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್ ಮತ್ತು ಪಿಎಸಿ ಪ್ರವಾಹ ಬೆಟಾಲಿಯನ್ ಪರಿಹಾರ ಮತ್ತು ರಕ್ಷಣಾ ಕಾರ್ಯದಲ್ಲಿ ನಿರತವಾಗಿವೆ.

<><*<><>*><>

ನೀಟ್-ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಬಿಹಾರದಲ್ಲಿ ಇನ್ನಿಬ್ಬರನ್ನು ಬಂಧಿಸಿದೆ. ಒಬ್ಬ ವ್ಯಕ್ತಿಯನ್ನು ನಳಂದಾದಿಂದ ಮತ್ತು ಇನ್ನೊಬ್ಬನನ್ನು ಬಿಹಾರದ ಗಯಾ ಜಿಲ್ಲೆಯಿಂದ ಬಂಧಿಸಲಾಗಿದೆ.

<><*<><>*><>

ಅಮರನಾಥ ಗುಹೆ ದೇಗುಲಕ್ಕೆ ತೀರ್ಥಯಾತ್ರೆ ಮಾಡಲು ೪ ಸಾವಿರದ ೬೨೭ ಯಾತ್ರಾರ್ಥಿಗಳ ಮತ್ತೊಂದು ತಂಡವು ಜಮ್ಮುವಿನ ಭಗವತಿ ನಗರ ಯಾತ್ರಿ ನಿವಾಸದ ಮೂಲ ಶಿಬಿರದಿಂದ ಕಾಶ್ಮೀರ ಕಣಿವೆಗೆ ಹೊರಟಿದೆ.  ಇಂದು ಮುಂಜಾನೆ ೧೮೫ ವಾಹನಗಳ ಯಾತ್ರಾರ್ಥಿಗಳು ಬೇಸ್ ಕ್ಯಾಂಪ್‌ನಿಂದ ಹೊರಟರು. ತಂಡದಲ್ಲಿ ೩ ಸಾವಿರದ ೪೨೨ ಪುರುಷರು, ೧ ಸಾವರಿದ ೨೭ ಮಹಿಳೆಯರು, ೨೬ ಮಕ್ಕಳು, ೧೩೭ ಸಾಧುಗಳು ಮತ್ತು ೧೫ ಸಾಧ್ವಿಗಳು (ಮಹಿಳಾ ಸಾಧುಗಳು) ಸೇರಿದ್ದಾರೆ.

<><*<><>*><>

ಹತ್ರಾಸ್ ಕಾಲ್ತುಳಿತ ಪ್ರಕರಣ ಕುರಿತು ವಿಶೇಷ ತನಿಖಾ ತಂಡ- ಎಸ್‌ಐಟಿ, ನಿನ್ನೆ ಉತ್ತರ ಪ್ರದೇಶ ಸರ್ಕಾರಕ್ಕೆ ವರದಿ ಸಲ್ಲಿಸಿದೆ.  ಇದರ ಆಧಾರದ ಮೇಲೆ ಸರ್ಕಾರ, ಆರು ಅಧಿಕಾರಿಗಳನ್ನು ಅಮಾನತುಗೊಳಿಸಿದೆ. ಎಸ್‌ಐಟಿ, ಕಾರ್ಯಕ್ರಮದ ಆಯೋಜಕರ ನಿರ್ಲಕ್ಷ್ಯವೇ ಈ ಘಟನೆಗೆ ಪ್ರಮುಖ ಕಾರಣವೆಂದು ಹೇಳಿದೆ. ವರದಿ ಆಧರಿಸಿ, ಹತ್ರಾಸ್ ಜಿಲ್ಲೆಯ ಎಸ್‌ಡಿಎಂ, ಮತ್ತು ತಹಸೀಲ್ದಾರ್ ಸೇರಿದಂತೆ ೬ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ.  ಎಸ್‌ಐಟಿ ತಂಡ, ಈ ಘಟನೆಗೆ ಸ್ಥಳೀಯ ಆಡಳಿತವನ್ನೇ ಹೊಣೆಗಾರರನ್ನಾಗಿಸಿದೆ. ಕಾರ್ಯಕ್ರಮದ ಆಯೋಜಕರು ನೆರೆದಿದ್ದ ಜನಸಮೂಹಕ್ಕೆ ಸೂಕ್ತ ವ್ಯವಸ್ಥೆ ಕಲ್ಪಿಸಲಿಲ್ಲ ಎಂದು ತನ್ನ ವರದಿಯಲ್ಲಿ ತಿಳಿಸಿದೆ.  ಎಸ್‌ಐಟಿ ತಂಡ, ಇದೇ ತಿಂಗಳ ೨, ೩ ಮತ್ತು ೫ ರಂದು ಅಪಘಾತ ಸ್ಥಳಕ್ಕೆ ಭೇಟಿ ನೀಡಿ ವರದಿ ಸಲ್ಲಿಸಲು ಸುಮಾರು ೧೨೫ ಜನರನ್ನು ವಿಚಾರಣೆಗೆ ಒಳಪಡಿಸಿತ್ತು.

<><*<><>*><>

ಕಲ್ಲಿದ್ದಲು ಸಚಿವಾಲಯ, ಪರಿಸರ ಸಂರಕ್ಷಣೆ ಮತ್ತು ಸಂಪನ್ಮೂಲ ಬಳಕೆಗೆ ಮಹತ್ವದ ಕ್ರಮದಲ್ಲಿ ಉಷ್ಣ ವಿದ್ಯುತ್ ಸ್ಥಾವರಗಳಿಂದ ಉತ್ಪತ್ತಿಯಾಗುವ ಹಾರು ಬೂದಿಯ ಸರಿಯಾದ ವಿಲೇವಾರಿ ಮತ್ತು ಮರುಬಳಕೆಯನ್ನು ಖಚಿತಪಡಿಸಿಕೊಳ್ಳಲು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದೆ. ಹಾರುಬೂದಿ ವಿಲೇವಾರಿಗಾಗಿ ೧೩ ಥರ್ಮಲ್ ಪವರ್ ಪ್ಲಾಂಟ್‌ಗಳಿಗೆ ೧೯ ಗಣಿ ಖಾಲಿ ಜಾಗಗಳನ್ನು ನೀಡಲಾಗಿದೆ ಎಂದು ಸಚಿವಾಲಯ ಕೇಂದ್ರೀಯ ಗಣಿ ಯೋಜನೆ ಮತ್ತು ವಿನ್ಯಾಸ ಸಂಸ್ಥೆ ಸಹಯೋಗದೊಂದಿಗೆ, ಉಷ್ಣ ವಿದ್ಯುತ್ ಸ್ಥಾವರಗಳಿಗೆ ಫ್ಲೈ ಆಶ್ ಬ್ಯಾಕ್‌ಫಿಲ್ಲಿಂಗ್‌ಗಾಗಿ ಗಣಿ ಖಾಲಿ ಜಾಗಗಳ ಹಂಚಿಕೆಗೆ ಅರ್ಜಿ ಪ್ರಕ್ರಿಯೆಯನ್ನು ನಿರ್ವಹಿಸಲು ಕೇಂದ್ರೀಕೃತ ಪೋರ್ಟಲ್ ಅನ್ನು ರಚಿಸುವ ಪ್ರಕ್ರಿಯೆಯಲ್ಲಿದೆ.

<><*<><>*><>

ಚೆನ್ನೈನ ಎಂ.ಎ ಚಿದಂಬರಂ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಮಹಿಳಾ ಟಿ-೨೦ ಕ್ರಿಕೆಟ್ ಸರಣಿಯ ಕೊನೆಯ ಪಂದ್ಯದಲ್ಲಿ, ಭಾರತದ ವನಿತೆಯರ ತಂಡ ೧೦ ವಿಕೆಟ್‌ಗಳಿಂದ ಜಯಗಳಿಸಿದೆ. ಮೊದಲು ಬ್ಯಾಟ್ ಮಾಡಿದ ದಕ್ಷಿಣ ಆಫ್ರಿಕಾ ೧೭.೧ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ಕೇವಲ ೮೪ ರನ್ ಗಳಿಸಿತು. ದಕ್ಷಿಣ ಆಫ್ರಿಕಾ ಪರ ತಜ್ಮಿನ್ ಬ್ರಿಟ್ಸ್ ೨೦, ಅನ್ನೆಕೆ ಬೋಶ್೧೭ ಹಾಗೂ ಮಾರಿಜಾನ್ನೆ ಕಾಪ್ ೧೦ ರನ್ ಗಳಿಸಿದರು.  ಅತ್ಯುತ್ತಮ ಬೌಲಿಂಗ್ ಪ್ರದರ್ಶನ ತೋರಿದ ಭಾರತದ ಬೌಲರ್‌ಗಳು ದಕ್ಷಿಣ ಆಫ್ರಿಕಾವನ್ನು ಕಡಿಮೆ ಮೊತ್ತಕ್ಕೆ ಕಟ್ಟಿ ಹಾಕುವಲ್ಲಿ ಯಶಸ್ವಿಯಾದರು. ಭಾರತದ ಪೂಜಾ ವಸ್ತ್ರಾಕರ್ ೪, ರಾಧಾ ಯಾದವ್ ೩, ಅರುಂಧತಿ ರೆಡ್ಡಿ , ಶ್ರೇಯಾಂಕ ಪಾಟೀಲ್ ಹಾಗೂ ದೀಪ್ತಿ ಶರ್ಮಾ ತಲಾ ೧ ವಿಕೆಟ್ ಪಡೆದರು. ೮೫ ರನ್ ಗಳ ಸಾಧಾರಣ ಗುರಿ ಬೆನ್ನತ್ತಿದ ಭಾರತ ತಂಡ ಆರಂಭಿಕರಾದ ಶಫಾಲಿ ವರ್ಮಾ೨೭ ಹಾಗೂ ಸ್ಮೃತಿ ಮಂದಾನ ಅವರ ೫೪ ರನ್ ಗಳ ಆಕರ್ಷಕ ಅರ್ಧಶತಕದ ನೆರವಿನಿಂದ ಭಾರತದ ವನಿತೆಯರು ಕೇವಲ ೧೦.೫ ಓವರ್‌ಗಳಲ್ಲಿ ಗುರಿ ತಲುಪಿದರು.

ಇದರೊಂದಿಗೆ ಮೂರು ಪಂದ್ಯಗಳ ಸರಣಿಯಲ್ಲಿ ೧-೧ ರಿಂದ ಸಮಬಲ ಸಾಧಿಸಿದಂತಾಯ್ತು. ಭಾರತದ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ ಭಾರತದ ಪೂಜಾ ವಸ್ತ್ರಾಕರ್ ಪಂದ್ಯ ಶ್ರೇಷ್ಠ ಪ್ರಶಸ್ತಿ ಹಾಗೂ ಸರಣಿಯಲ್ಲಿ ಅವರು ನೀಡಿದ ಅದ್ಭುತ ಪ್ರದರ್ಶನಕ್ಕಾಗಿ ಸರಣಿ ಶ್ರೇಷ್ಠ ಪ್ರಶಸ್ತಿಯನ್ನು ಸಹ ಪಡೆದುಕೊಂಡರು.

**<><*<><>*><>**

ಭಾರತ ಮತ್ತು ಜಿಂಬಾಬ್ವೆ ನಡುವಿನ ಟಿ-೨೦ ಸರಣಿಯ ಮೂರನೇ ಪಂದ್ಯ ಇಂದು ಹರಾರೆಯಲ್ಲಿ ನಡೆಯಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೪:೩೦ಕ್ಕೆ ಆರಂಭವಾಗಲಿದೆ. ಐದು ಪಂದ್ಯಗಳ ಸರಣಿಯಲ್ಲಿ ಉಭಯ ತಂಡಗಳು ಒಂದೊಂದು ಪಂದ್ಯ ಗೆದ್ದಿವೆ. ಶುಭಮನ್ ಗಿಲ್ ನೇತೃತ್ವದ ಯುವ ತಂಡ ಈ ಪಂದ್ಯವನ್ನು ಗೆದ್ದು ಮುನ್ನಡೆ ಸಾಧಿಸುವ ವಿಶ್ವಾಸದಲ್ಲಿದೆ. ಏತನ್ಮಧ್ಯೆ, ಬಿಸಿಸಿಐ, ಜಿಂಬಾಬ್ವೆ ಕ್ರಿಕೆಟ್ ಮತ್ತು ಜಿಂಬಾಬ್ವೆ ಪ್ರವಾಸೋದ್ಯಮದೊಂದಿಗೆ ಹರಾರೆಯಲ್ಲಿ ಭಾರತೀಯ ಕ್ರಿಕೆಟ್ ತಂಡ ಮತ್ತು ಅವರ ಕುಟುಂಬಗಳಿಗೆ ವೈಲ್ಡ್ ಲೈಫ್ ಟೂರ್ ಅನ್ನು ಆಯೋಜಿಸಿದೆ. ಬಿಸಿಸಿಐ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಪ್ರವಾಸದ ಮಾಹಿತಿಯನ್ನು ಹಂಚಿಕೊಂಡಿದೆ.

**<><*<><>*><>**

ಜರ್ಮನಿಯಲ್ಲಿ ನಡೆಯುತ್ತಿರುವ ಯುರೋಪಿಯನ್ ಫುಟ್ಬಾಲ್ ಚಾಂಪಿಯನ್‌ಶಿಪ್ ಯುರೋ ೨೦೨೪ ರಲ್ಲಿ, ಕಳೆದ ರಾತ್ರಿ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಸ್ಪೇನ್ ೨-೧ ಗೋಲುಗಳಿಂದ ಫ್ರಾನ್ಸ್ ವಿರುದ್ಧ ಜಯಗಳಿಸಿದೆ.

**<><*<><>*><>**

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ -ಬಿಸಿಸಿಐ, ಮಾಜಿ ಕ್ರಿಕೆಟ್ ಆಟಗಾರ ಗಂಭೀರ್ ಅವರನ್ನು ಹಿರಿಯ ಪುರುಷರ ತಂಡದ ಹೊಸ ಮುಖ್ಯ ಕೋಚ್ ಆಗಿ ನೇಮಕ ಮಾಡಿದೆ. ಬಿಸಿಸಿಐ ಕಾರ್ಯದರ್ಶಿ ಜಯ್ ಶಾ, ನಿನ್ನೆ ಸಾಮಾಜಿಕ ಜಾಲತಾಣದ ಪೋಸ್ಟ್ ಮೂಲಕ ಈ ಘೋಷಣೆ ಮಾಡಿದ್ದಾರೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**